ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	966(1324)
ಸದಸ್ಯರ ಹೆಸರು	ಶ್ರೀ ಆರ್ ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	15–03–2021
ಉತ್ತರಿಸಬೇಕಾದ ಸಚಿವರು	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಪ್ರಶ್ನೆ	ಉತ್ತರ
ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ನಡೆಸುತ್ತಿರುವ ಪ್ರಾಥಮಿಕ ,ಪ್ರೌಢ ಮತ್ತು ಪದವಿಪೂರ್ವ ಕಾಲೇಜುಗಳ ಮಂಜೂರಾತಿ ಅರ್ಜಿ ಶುಲ್ಕ ಸಂಸ್ಕರಣ ಶುಲ್ಕ ನವೀಕರಣ ಶುಲ್ಕ ಇತ್ಯಾದಿ ಶುಲ್ಕಗಳಲ್ಲಿ ಶೇಕಡ 50ರಷ್ಟು ರಿಯಾಯಿತಿಯನ್ನು 2018ರ ಆದೇಶದಲ್ಲಿ ರದ್ದುಪಡಿಸಿರುವುದು ನಿಜವೇ;	ಹೌದು, ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮಾನ್ಯತೆ ನಿಯಮಗಳು 1999ರನ್ವಯ ಮಾನ್ಯತೆ ನವೀಕರಣಕ್ಕೆ ವಿಧಿಸುವ ಸಂಸ್ಕರಣ ಶುಲ್ಕ ಮತ್ತು ಭದ್ರತಾ ಠೇವಣಿಗೆ ಸಂಬಂಧಿಸಿದಂತೆ ದಿನಾಂಕ:07–03–2018ರ ಅಧಿಸೂಚನೆಯಲ್ಲಿ ತಿದ್ದುಪಡಿ ಮಾಡುವ ಮೂಲಕ ಪೂರ್ವ ಪ್ರಾಥಮಿಕ, ಪ್ರಾಥಮಿಕ, ಪ್ರೌಢ ಮತ್ತು ಹಿರಿಯ ಪ್ರೌಢ ಶಿಕ್ಷಣ ಶಾಲೆಗಳ ಮಾನ್ಯತೆ ನವೀಕರಣ ಮತ್ತು ಅರ್ಜಿ ಸಂಸ್ಕರಣ ಶುಲ್ಕ ಹಾಗೂ ಭದ್ರತಾ ಠೇವಣಿಯನ್ನು ಪರಿಷ್ಕರಿಸಲಾಗಿದೆ.
ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ನಡೆಸುವ ಶಿಕ್ಷಣ ಸಂಸ್ಥೆಗಳಿಗೆ ಈ ಶುಲ್ಕಗಳಲ್ಲಿ 50% ರಿಯಾಯಿತಿ ರದ್ದುಪಡಿಸಿದರೆ ಈ ಸಂಸ್ಥೆಗಳು ತುಂಬಾ ಸಂಕಷ್ಟಕ್ಕೊಳಗಾಗುವುದರಿಂದ 2018ರ ಆದೇಶವನ್ನು ಹಿಂಪಡೆಯಲು ಕ್ರಮವಹಿಸಲಾಗುವುದೇ;	ಯಾವುದೇ ಪ್ರಸ್ತಾವನೆ ಇರುವುದಿಲ್ಲ.
ಇ) ಎಸ್.ಸಿ.ಪಿ/ಟಿ.ಎಸ್.ಪಿ ಹಣದಿಂದ ಹಣ ಹೊಂದಿಸಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಶಾಲೆಗಳಿಗೆ ಹಿಂದೆ ನೀಡುತ್ತಿದ್ದಂತೆ ಶುಲ್ಕಗಳಲ್ಲಿ 50% ರಿಯಾಯಿತಿಯನ್ನು ಮುಂದುವರೆಸಲಾಗುವುದೇ?	

ಇಪಿ 96 ಪಿಜಿಸಿ 2021

[ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.